ಪ್ರಧಾನ ನ್ಯಾಯಿಕ ದಂಡಾಧಿಕಾರಿಗಳು, ಗೋಕಾಕ ಇವರ ನ್ಯಾಯಾಲಯ ಸಾಃ ಗೋಕಾಕ

ಸಾಕ್ಷಿಗೆ ದಿನಾಂಕಃ **02-08-2023** ರಂದು ಪ್ರಮಾಣ ವಚನ ಬೋಧಿಸಲಾಯಿತು

C.C.No.1858/2011
CW-2 PW-2

| | | |
|---|---|---|
| ಸಾಕ್ಷಿದಾರರ ಹೆಸರು | - | ಪ್ರಭಾಕರ ನಾರಾಯಣ ಚೌವಾನ |
| ವಯಸ್ಸು | - | 63 ವರ್ಷ |
| ಉದ್ಯೋಗ | - | ವ್ಯವಸಾಯ |
| ಸಾಕೀನ | - | ಗೋಕಾಕ |

ಮುಖ್ಯ ವಿಚಾರಣೆ: ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನನಗೆ ಚಾಸಾ-1 ಮತ್ತು 3 ರವರ ಪರಿಚಯ ಇದೆ. ಚಾಸಾ-3 ರವರು ಈಗ ಮೃತಪಟ್ಟಿರುತ್ತಾರೆ. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ನಿಪಿ-2 ರ ಪಂಚನಾಮೆ ತೋರಿಸಿದ್ದು ಸಾಕ್ಷಿಯ ಅದರಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿರುತ್ತಾರೆ. ಹೀಗಾಗಿ ಸದರಿ ಪಂಚನಾಮೆಯನ್ನು ನಿಪಿ-3 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-3 ಎ ಮತ್ತು ಬಿ ಅಂತಾ ಗುರುತಿಲಾಯಿತು. ನಾನು ನಿಪಿ-3 ಕ್ಕೆ ನಾನು ಗೊಕಾಕ ನಗರದ ಸೋಮವಾರ ಪೇಟೆಯ ದ್ಯಾಮನ ಗುಡಿಗೆ ಹೋದಾಗ ಪೋಲಿಸರು ನನ್ನಿಂದ 2 ಬಿಳಿ ಹಾಳೆಯ ಮೇಲೆ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಗೆ ಶ್ವಾನ ದಳದ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿಯ ಅದರಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿರುತ್ತಾರೆ. ಹೀಗಾಗಿ ಸದರಿ ಶ್ವಾನ ದಳದ ಪಂಚನಾಮೆಯನ್ನು ನಿಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-4 ಎ ಅಂತಾ ಗುರುತಿಲಾಯಿತು. ನಾನು ನಿಪಿ-4 ಕ್ಕೂ ಸಹ ನಾನು 2011 ರಲ್ಲಿ ಗೊಕಾಕ ನಗರದ ಸೋಮವಾರ ಪೇಟೆಯ ದ್ಯಾಮನ ಗುಡಿಗೆ ಹೋದಾಗ ಪೋಲಿಸರು ನನ್ನಿಂದ ಒಂದು ಬಿಳಿ ಹಾಳೆಯ ಮೇಲೆ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ- 3 ಮತ್ತು 4 ಕ್ಕೆ ಬೇರೆ ಯಾರು ಯಾರು ಸಹಿ ಮಾಡಿರುತ್ತಾರೆ ಎಂಬುವುದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದು ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ದಿ **08-06-2011** ರಂದು ನನ್ನನ್ನು ಮತ್ತು ಚಾಸಾ-3 ರವರನ್ನು ಗೋಕಾಕ ಶಹರದ ಪೋಲಿಸರು ಅಪ್ಸರ ಕೂಟದಲ್ಲಿರುವ ಗ್ರಾಮ ದೇವತೆ ದೇವಸ್ಥಾನದ ಹತ್ತಿರ ಕೆರೆಯಿಸಿ ಕರೆಯಿಸಿ ಈ ಪ್ರಕರಣದ ಕುರಿತು ವಿವರಿಸಿ ಶ್ವಾನ ದಳದ ಪಂಚನಾಮೆಯನ್ನು ಬೆಳಿಗ್ಗೆ 9 ರಿಂದ 10.15 ಗಂಟೆ ವರೆಗೆ ನಿಪಿ-4 ರಂತೆ ಮಾಡಿದ್ದರು ಎಂದರೆ ಸರಿಯಲ್ಲ. ನಾನು ನಿಪಿ-4 ಕ್ಕೆ ನಿಪಿ-4 ಎ ರಂತೆ ಘಟನಾ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಅದರಂತೆ ಅದೇ ದಿನ ನನ್ನನ್ನು ಮತ್ತು ಚಾಸಾ-3 ರವರನ್ನು ಗೋಕಾಕ ಶಹರದ ಪೋಲಿಸರು ಅಪ್ಸರ ಕೂಟದಲ್ಲಿರುವ ಗ್ರಾಮ ದೇವತೆ ದೇವಸ್ಥಾನದ ಹತ್ತಿರ ಕೆರೆಯಿಸಿ ಕರೆಯಿಸಿ ಈ ಪ್ರಕರಣದ ಕುರಿತು ವಿವರಿಸಿ ಪಂಚರಾಗಲು ಕೋರಿಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಹಾಗೂ ಚಾಸಾ-3 ರವರು ಒಪ್ಪಿಕೊಂಡ ಮೆರೇಗೆ ಚಾಸಾ-1 ರವರು ತೋರಿಸಿದ ಘಟನಾ ಸ್ಥಳದಲ್ಲಿ ನಮ್ಮ ಸಮಕ್ಷಮ ನಿಪಿ-3 ರಂತೆ ಪಂಚನಾಮೆ ಬರೆದು ಬೆಳಿಗ್ಗೆ 11 ರಿಂದ 12 ಗಂಟೆ ವರೆಗೆ ನಿಪಿ-3 ರಂತೆ ಪಂಚನಾಮೆ ಮಾಡಿ ಮಾಡಿದ್ದರು ಎಂದರೆ ಸರಿಯಲ್ಲ. ನಿಪಿ-3 ರ ಪಂಚನಾಮೆ ಮಾಡುವ ಸಮಯದಲ್ಲಿ ಒಂದು ಸ್ಟಿಲ ಕಟ್ಟಿಗೆ ಹಾಗೂ ಕಪ್ಪು ಬಣ್ಣದ ಒಂದು ಕೀಲಿಯನ್ನು ಅಮಾನತು ಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ.

ನಾನು ನಿಪಿ-3 ಕ್ಕೆ ನಿಪಿ-3 ಎ ರಂತೆ ಘಟನಾ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲಃ

<u>ಮರು ವಿಚಾರಣೆಃ ಇಲ್ಲ</u>

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.